ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ:149: ಆರ್.ಟಿ.ಐ.:2016

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 06.08.2016.

# ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 19(1)ರಡಿ ಸಲ್ಲಿಸಿದ ಮೊದಲ ಮೇಲ್ಮನವಿಗಳ ವಿಚಾರಣೆಯಲ್ಲಿ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ: ಸುತ್ತೋಲೆ ಸಂ: ಸಿಆಸುಇ 116 ಆರ್‌ಟಿಐ 2009, ದಿ: 07.07.2010
ಸುತ್ತೋಲೆ ಸಂ: ಸಿಆಸುಇ 71 ಆರ್‌ಟಿಐ 2012, ದಿ: 29.06.2012
ಸುತ್ತೋಲೆ ಸಂ: ಸಿಆಸುಇ 92 ಆರ್‌ಟಿಐ 2012, ದಿ: 25.08.2012
ಸತ್ತೋಲೆ ಸಂ: ಸಿಆಸುಇ 115 ಆರ್‌ಟಿಐ 2015, ದಿ: 13.08.2015

---0---

ಮಾಹಿತಿ ಹಕ್ಕು ಅಧಿನಿಯಮ, 2005ರ ಸಂಪೂರ್ಣ ಅನುಷ್ಠಾನ ಮತ್ತು ಬಲವರ್ಧನೆಗಾಗಿ ಕರ್ನಾಟಕ ಮಾಹಿತಿ ಆಯೋಗವು 2014-15ನೇ ಸಾಲಿನ ವಾರ್ಷಿಕ ವರದಿಯಲ್ಲಿನ ಶಿಫಾರಸ್ಸುಗಳಲ್ಲಿ, ಕ್ರಮ ಸಂಖ್ಯೆ:7.10ರಲ್ಲಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತದೆ.

"ಪ್ರಥಮ ಮೇಲ್ಮನವಿ ಪ್ರಾಧಿಕಾರಿಯ ಆದೇಶದ ವಿರುದ್ಧ ಮಾತ್ರ ಆಯೋಗಕ್ಕೆ ಎರಡನೇ ಅಪೀಲನ್ನು ಸಲ್ಲಿಸುವುದು".

ಸಾಮಾನ್ಯವಾಗಿ, ಎಲ್ಲ ಕಾನೂನುಗಳ ಅಡಿಯಲ್ಲಿ, ಪ್ರಥಮ ಮೇಲ್ಮನವಿ ಪ್ರಾಧಿಕಾರವು ಹೊರಡಿಸಿದ ಆದೇಶಕ್ಕೆ ವಿರುದ್ಧವಾಗಿ ಎರಡನೇ ಅಪೀಲನ್ನು ಸಲ್ಲಿಸಲು ಅವಕಾಶವಿರುತ್ತದೆ, ಆದ್ದರಿಂದ, ಗೊತ್ತುಪಡಿಸಿರುವ ಅವಧಿಯ ಒಳಗಾಗಿ ಪ್ರಥಮ ಮೇಲ್ಮನವಿ ಪ್ರಾಧಿಕಾರಿಯು ಆದೇಶಗಳನ್ನು ಹೊರಡಿಸುವುದನ್ನು ಕಡ್ಡಾಯ ಮಾಡಬೇಕಿದೆ ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರವು ನಿಗದಿಪಡಿಸಿದ ಕಾಲಮಿತಿಯ ಒಳಗೆ ಆದೇಶವನ್ನು ಹೊರಡಿಸಲು ಸಾರ್ವಜನಿಕ ಮಾಹಿತಿ ಅಧಿಕಾರಿ ವಿಫಲನಾದ ಪಕ್ಷದಲ್ಲಿ, ಆತನ ವಿರುದ್ಧ ಪ್ರಥಮ ಮೇಲ್ಮನವಿ ಪ್ರಾಧಿಕಾರವು ತನ್ನ ಆದೇಶವನ್ನು ಜಾರಿಗೊಳಿಸುವುದು.

2..

ಆದ್ದರಿಂದ ಎಲ್ಲ ಮೊದಲ ಮೇಲ್ಮನವಿ ಪ್ರಾಧಿಕಾರಗಳು ಉಲ್ಲೇಖಿತ ಸರ್ಕಾರದ ಸುತ್ತೋಲೆಗಳಲ್ಲಿ ನೀಡಿರುವ ನಿರ್ದೇಶನಗಳನ್ನು ಪಾಲಿಸುವಂತೆ ಹಾಗೂ ಆಯೋಗವು ಗಮನಿಸಿರುವಂತೆ ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 19(1)ರಡಿ ಸಲ್ಲಿಸಲಾದ ಪ್ರಥಮ ಮೇಲ್ಮನವಿಗಳ ವಿಚಾರಣೆಯ ನಂತರ ಮೇಲ್ಮನವಿ ವಿಚಾರಣಾ ಆದೇಶವನ್ನು ಹೊರಡಿಸುವುದು ಕಡ್ಡಾಯವೆಂದು ತಮ್ಮ ಆಡಳಿತದ ಅಧೀನದಲ್ಲಿ ಬರುವ ಎಲ್ಲ ಸಾರ್ವಜನಿಕ ಪ್ರಾಧಿಕಾರಗಳ ಮೇಲ್ಮನವಿ ಪ್ರಾಧಿಕಾರಿಗಳಿಗೆ ಸೂಚಿಸುವುದು.

**(ಪರಮೇಶ್ ಪಾಂಡೆ)**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**ಇವರಿಗೆ,**

ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು